ಕರ್ನಾಟಕ ಸರ್ಕಾರ

ನಂ: ಎಎಲ್‌ಎನ್(ಇವಿಹೆಚ್)ಎಸ್‌ಆರ್/ 214/14-15

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ:. 12-6-2015

-: ಅಧಿಕೃತ ಜ್ಞಾಪನ :-

ವಿಷಯ: ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಪಣತ್ತೂರು ಗ್ರಾಮದ ಸರ್ವೆ ನಂ.105 ರಲ್ಲಿ 1-20 ಎಕರೆ/ಗುಂಟೆ, 0-06 ಗುಂಟೆ 'ಎ' ಖರಾಬು ಸೇರಿ 1-26 ಎಕರೆ/ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ಮುನಿಯಪ್ಪ ಮತ್ತು ಅನಂತಸ್ವಾಮಿ ಬಿನ್ ಲೇಟ್ ಮುನಿಕಾವೇರಪ್ಪ ಪಣತ್ತೂರು ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ 25/09/2014

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ.7 ಎಲ್‌ಜಿಪಿ 95 ದಿನಾಂಕ: 07-06-1999
2 ಸರ್ಕಾರದ ಸುತ್ತೋಲೆ ಪತ್ರ ಸಂಖ್ಯೆ: ಆರ್.ಡಿ.56 ಎಲ್.ಜಿ.ಪಿ. 2008 ದಿನಾಂಕ: 10-9-2008 ಮತ್ತು 24-9-2008
3. ತಹಶೀಲ್ದಾರ್. ಬೆಂಗಳೂರು ಪೂರ್ವ ತಾಲ್ಲೂಕು ರವರ ವರದಿ ಸಂಖ್ಯೆ: ಎಎಲ್‌ಎನ್ (ಪ)ಸಿಆರ್ 90/14-15 ದಿನಾಂಕ 21-1-2015
4 ಭೂ ಪರಿವರ್ತನಾ ಶುಲ್ಕ ರೂ.89,843-00 ಮತ್ತು 0-06 ಗುಂಟೆ 'ಎ' ಖರಾಬು ಕಿಮ್ಮತ್ತು ಎಕರೆಗೆ 320 ಲಕ್ಷಗಳಂತೆ ರೂ.48,00,000-00ಮೋಡಿ ಶುಲ್ಕ ರೂ.55-00 ಒಟ್ಟು ರೂ.48,89,898-00 ಗಳನ್ನು ಚಲನ್ ನಂ.37 & 38 ದಿನಾಂಕ 30-5-2015 ರಂದು ಎಸ್.ಬಿ.ಎಂ. ಕೆ.ಆರ್.ಪುರ ಶಾಖೆ, ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.
5 ಸಹಾಯಕ ನಿರ್ದೇಶಕರು (ಪೂರ್ವ) ನಗರ ಯೋಜನಾ ವಿಭಾಗ, ಬೆಂ.ಅ.ಪ್ರಾ, ಬೆಂಗಳೂರು ರವರ ಪತ್ರ ಸಂ.ಬೆಂಅಪ್ರಾ/ನಯೋಸ/ಸಿ.ಎಲ್-1643/1634/2014-15 ದಿನಾಂಕ 02-02-2015 ಮತ್ತು ಉಪ ಆಯುಕ್ತರು (ಭೂ.ಸ್ವಾ), ಬೆಂ.ಅಪ್ರಾ, ಬೆಂಗಳೂರು ರವರ ಪತ್ರ ಸಂ. ಬೆಂಅಪ್ರಾ/ ಉಪ(ಭೂಸ್ವಾ)/1024/2014-15 ದಿನಾಂಕ 5-2-2015

::-::-::-::

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 95(2),95(4) ಮತ್ತು 95(7) ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ವಾಸದ ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ.54,450/- (ಐವತ್ನಾಲ್ಕು ಸಾವಿರದ ನಾಲ್ಕುನೂರಾ ಐವತ್ತು ಮಾತ್ರ) ಗಳಂತೆ ಅರ್ಜಿದಾರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ಮುನಿಯಪ್ಪ ಮತ್ತು ಅನಂತಸ್ವಾಮಿ ಬಿನ್ ಲೇಟ್ ಮುನಿಕಾವೇರಪ್ಪ ಪಣತ್ತೂರು ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ಪೂರ್ವ ತಾಲ್ಲೂಕು ವರ್ತೂರು ಹೋಬಳಿ, ಪಣತ್ತೂರು ಗ್ರಾಮದ ಸರ್ವೆ ನಂ.105 ರಲ್ಲಿ 1-20 ಎಕರೆ/ಗುಂಟೆ, 0-06 ಗುಂಟೆ 'ಎ' ಖರಾಬು ಸೇರಿ 1-26 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1 ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸ್ಥಳೀಯ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ /ಬಿಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ), ಬಿ.ಎಂ.ಐ.ಸಿ.ಎ.ಪಿ.ಎ /ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2 ಈ ಭೂ ಪರಿವರ್ತಿತ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು, ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

--2

16 ಪ್ರಶ್ನಿತ ಜಾಗದಲ್ಲಿ ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

17 ಉಲ್ಲೇಖ (5) ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರು ದಿನಾಂಕ 02-02-2015 ರ ಪತ್ರದಲ್ಲಿ ತಿಳಿಸಿರುವ ಷರತ್ತಿಗೆ ಒಳಪಡಿಸಿದೆ.

18 ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮತೆಗೆದುಕೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

:: **ಷೆಡ್ಯೂಲ್ ವಿವರ** ::

ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಪಣತ್ತೂರು ಗ್ರಾಮದ ಸರ್ವೆ ನಂ.105 ರಲ್ಲಿ 1-20 ಎಕರೆ/ಗುಂಟೆ, 0-06 ಗುಂಟೆ 'ಎ' ಖರಾಬು ಸೇರಿ 1-26 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ

| ಸ.ನಂ. | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 105 | ಸ.ನಂ.106 ರ ಜಮೀನು | ಸ.ನಂ.104 ರ ಜಮೀನು | ರಸ್ತೆ | ಸ.ನಂ.54 ರ ಜಮೀನು |

ಸಹಿ/-
( ವಿ. ಶಂಕರ್ )
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-</u>

1) ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನ ಮತ್ತು ಚಲನ್ ಹಾಗೂ ಕರಾರು ಪತ್ರದೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಳ್ಳಾರಿ ರಸ್ತೆ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6) ಅರ್ಜಿದಾರರಾದ ಶ್ರೀ ಮುನಿಯಪ್ಪ ಮತ್ತು ಅನಂತಸ್ವಾಮಿ ಬಿನ್ ಲೇಟ್ ಮುನಿಕಾವೇರಪ್ಪ, ಪಣತ್ತೂರು ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ರವರಿಗೆ ಮಾಹಿತಿಗಾಗಿ.
7) ಹೆಚ್ಚಿನ ಪ್ರತಿ

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.